ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12**

ಸಂಖ್ಯೆ: ಪಪೂಶಿಇ/ಪರೀಕ್ಷೆ/ವಾ.ಪ.ಅ/2019-20 ದಿನಾಂಕ: 19.09.2019.

**ಸುತ್ತೋಲೆ**

**ವಿಷಯ:** ಮಾರ್ಚ್ 2020ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಪುನರಾವರ್ತಿತ (Repeater) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿಯ ಸುತ್ತೋಲೆ ಸಂಖ್ಯೆ ಪಪೂಶಿಇ/ಪರೀಕ್ಷೆ/ವಾ.ಪ.ಅ/ 2018-19 ದಿನಾಂಕ: 04.07.2019.
2. ಸರ್ಕಾರದ ಆದೇಶ ಸಂಖ್ಯೆ : ಇಡಿ 195 ಡಿಜಿಡಿ 2017, ಬೆಂಗಳೂರು ದಿನಾಂಕ 20.03.2018
3. ಈ ಕಛೇರಿಯ ಸಮ ಸಂಖ್ಯೆ ಸುತ್ತೋಲೆ ದಿನಾಂಕ: 05.09.2019

* * * * *

ಮಾರ್ಚ್ 2020ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳಿಗೆ ಪುನರಾವರ್ತಿತ (Repeater) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖಿತ ಸುತ್ತೋಲೆಗಳಲ್ಲಿ ಅಂತಿಮ ದಿನಾಂಕವನ್ನು 17.09.2019ರವರೆಗೆ ವಿಸ್ತರಿಸಿ ಆದೇಶಿಸಲಾಗಿತ್ತು. ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿಯ ಮೇರೆಗೆ ಸದರಿ ದಿನಾಂಕವನ್ನು ಅಂತಿಮ ಬಾರಿಯಾಗಿ ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಿದೆ.

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಕಾಲೇಜಿನವರು Online Portal ನಲ್ಲಿ uploud ಮಾಡಲು ಕಡೇ ದಿನಾಂಕ | ಕಾಲೇಜಿನವರು ಪರೀಕ್ಷಾ ಶುಲ್ಕವನ್ನು ಒಂದೇ ಕಂತಿನಲ್ಲಿ ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ |
|---|---|---|
| 04.10.2019 | 05.10.2019 | 10.10.2019 |

ಅರ್ಜಿ ಸ್ವೀಕರಿಸಲು ವಿಸ್ತರಿಸಲಾದ ವಿಸ್ತೃತ ದಿನಾಂಕಗಳಲ್ಲಿ ಸ್ವೀಕರಿಸಿ ಪಾವತಿಸಬೇಕಾದ ಶುಲ್ಕ ವಿವರ

| ಇಲಾಖಾ ಸಮಸಂಖ್ಯೆ ಮೂಲ ಸುತ್ತೋಲೆ ದಿನಾಂಕ 04.07.2019 ರನ್ವಯ | ಸುತ್ತೋಲೆಯಲ್ಲಿ ವಿವರಿಸಿದಂತೆ ಶುಲ್ಕ |
|---|---|
| ಪ್ರಸ್ತುತ ವಿಸ್ತರಿಸಿದ ದಿನಾಂಕ 05.09.2019 ರಿಂದ 17.09.2019 ರವರೆಗಿನ ದಂಡ ಶುಲ್ಕದೊಂದಿಗೆ | ದಿನವೊಂದಕ್ಕೆ ರೂ 50/- ರಂತೆ (ರಜಾ ದಿನಗಳನ್ನು ಹೊರತು ಪಡಿಸಿ) |
| ದಿನಾಂಕ 18.09.2019 ರಿಂದ 04.10.2019 ರವರೆಗೆ ದಂಡ ಶುಲ್ಕದೊಂದಿಗೆ | ದಿನವೊಂದಕ್ಕೆ ರೂ 70/- ರಂತೆ (ರಜಾ ದಿನಗಳನ್ನು ಹೊರತು ಪಡಿಸಿ) |

ಸದರಿ ಪರೀಕ್ಷೆಗಳಿಗೆ ಪುನರಾವರ್ತಿತ (Repeater) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಇದೇ ಅಂತಿಮ ಅವಕಾಶವಾಗಿರುತ್ತದೆ. ಆದಕಾರಣ ಮೇಲೆ ತಿಳಿಸಿರುವ ದಿನಾಂಕದ ನಂತರ ಕಾಲೇಜಿನ ಪ್ರಾಂಶುಪಾಲರು ಯಾವುದೇ ಪುನರಾವರ್ತಿತ (Repeater) ಅಭ್ಯರ್ಥಿಗಳ ಅರ್ಜಿಗಳನ್ನು ಸ್ವೀಕರಿಸಕೂಡದು. ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕವನ್ನು ಮತ್ತೊಮ್ಮೆ ವಿಸ್ತರಿಸಲಾಗುವುದಿಲ್ಲ.

ಜಿಲ್ಲಾ ಉಪನಿರ್ದೇಶಕರು ಒಂದೇ ಕಂತಿನಲ್ಲಿ ಎಲ್ಲಾ ಪುನರಾವರ್ತಿತ (Repeater) ಅಭ್ಯರ್ಥಿಗಳ ಅರ್ಜಿಗಳನ್ನು ಖುದ್ದಾಗಿ ದಿನಾಂಕ 14.10.2019 ರಂದು ಕೇಂದ್ರ ಕಛೇರಿಗೆ ಸಲ್ಲಿಸುವುದು.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ -
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಇಲಾಖಾ ಇ-ಆಡಳಿತ ಶಾಖೆ, (ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು).
4. ಕಛೇರಿ / ಹೆಚ್ಚುವರಿ ಪ್ರತಿ.

Repeaters Exam Fee 2020 M